**<u>ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕೆ.ಆರ್ ನಗರ</u>**

ಸಿಸಿ ನಂ. **107/2025**

**ಪಿರ್ಯಾದುದಾರರುಃ** ಶ್ರೀ ಶಿವಣ್ಣ ಬಿನ್ ಲೇಟ್ ಸುಬ್ಬೇಗೌಡ,

**--ವಿರುಧ್ಧ –**

**ಆರೋಪಿಃ** ಶ್ರೀಮತಿ ಲಲಿತ ಕೋಂ ಲೇಟ್ ಬಿರೇಶ್

**<u>ಆಪಾದನೆ</u>**

ಆರೋಪಿಯಾದ ನೀವು ಪಿರ್ಯಾದುದಾರರಿಗೆ ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ರೂ.2,50,000/- ಮರುಪಾವತಿಗಾಗಿ **ಸೂರ್ಯೋದಯ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿ., ಕೆ ಆರ್ ನಗರ ಶಾಖೆ,** ಚೆಕ್ ನಂಃ 000004 ದಿನಾಂಕಃ 03.02.2025 ರೂ.2,50,000/- ಎಂದು ನಮೂದಿಸಿ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯನ್ನು ಹೊಂದಿರುವ **ಕರ್ನಾಟಕ ಗ್ರಾಮೀಣ ಬ್ಯಾಂಕ್, ಹಂಪಾಪುರ ಶಾಖೆ,** ಇಲ್ಲಿ ನಗದೀಕರಿಸಲು ಹಾಜರುಪಡಿಸಿದಾಗ, ಸದರಿಯವರು ನಿಮ್ಮ ಖಾತೆಯಲ್ಲಿ **"ಸಾಕಷ್ಟು ಹಣವಿಲ್ಲ"** ಎಂಬ ಹಿಂಬರಹಗಳೊಂದಿಗೆ ಚೆಕ್ಕು ಅಮಾನ್ಯಗೊಂಡಿದ್ದು, ಆ ಬಗ್ಗೆ ಸದರಿ ಬ್ಯಾಂಕಿನವರು ದಿನಾಂಕ: 19.02.2025 ರಂದು ಹಿಂಬರಹವನ್ನು ನೀಡಿದ್ದು, ನಂತರ ಫಿರ್ಯಾದಿದಾರರು ತಮ್ಮ ವಕೀಲರ ಮುಖಾಂತರ ದಿನಾಂಕಃ 24.02.2025 ರಂದು ಬರವಣಿಗೆ ರೂಪದಲ್ಲಿ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದರೂ ಸಹ ಚೆಕ್ಕಿನಲ್ಲಿರುವ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿದ್ದೀರೆಂದು ಆಪಾದಿಸಲಾಗಿದೆ.

ಪ್ರಶ್ನೆಃ-1 ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರಃ

ಪ್ರಶ್ನೆ-2 ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೇ?

ಉತ್ತರಃ

(ದಿನಾಂಕ 06.10.2025 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ಧೃಡೀಕರಿಸಿದೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ಕೆ ಆರ್ ನಗರ.**